"ELECTION URGENT"

सत्यमेव जयते

# ರಾಜ್ಯ ಚುನಾವಣಾ ಆಯೋಗ, ಕರ್ನಾಟಕ

ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಂಡಳಿ ಕಟ್ಟಡ (ಹಿಂಭಾಗ), 1ನೇ ಮಹಡಿ, ನಂ.8, ಕನ್ನಿಂಗ್ ಹ್ಯಾಂ ರಸ್ತೆ, ಬೆಂಗಳೂರು-52.

**ಸಂಖ್ಯೆ: ರಾಚುಆ.30.ಇಯುಬಿ.2018, ದಿನಾಂಕ: 16-08-2018**

## ಪತ್ರಿಕಾ ಪ್ರಕಟಣೆ

ರಾಜ್ಯ ಚುನಾವಣಾ ಆಯೋಗವು ಒಟ್ಟು 105 ನಗರ ಸ್ಥಳೀಯ ಸಂಸ್ಥೆಗಳಿಗೆ ದಿನಾಂಕ: 02.08.2018 ರಂದು ಚುನಾವಣಾ ವೇಳಾಪಟ್ಟಿಯನ್ನು ಪ್ರಕಟಿಸಿ, ಸಾರ್ವತ್ರಿಕ ಚುನಾವಣೆಯನ್ನು ನಡೆಸಲು ಆದೇಶಿಸಲಾಗಿತ್ತು. ಭಾರತದ ಮಾಜಿ ಪ್ರಧಾನಿಗಳಾದ ಶ್ರೀ ಅಟಲ್ ಬಿಹಾರಿ ವಾಜಪೇಯಿ ರವರು ದಿನಾಂಕ: 16.08.2018 ರಂದು ನಿಧನರಾಗಿರುವುದರಿಂದ ಸರ್ಕಾರವು ದಿನಾಂಕ: 17.08.2019 ರಂದು ಸಾರ್ವಜನಿಕ ರಜೆಯನ್ನು ಘೋಷಿಸಿದೆ. ಮೇಲ್ಕಂಡ ಸನ್ನಿವೇಶದ ಹಿನ್ನೆಲೆಯಲ್ಲಿ ಆಯೋಗವು ದಿನಾಂಕ: 16.08.2018ರ ತಿದ್ದುಪಡಿ ಆದೇಶದಲ್ಲಿ ಚುನಾವಣಾ ವೇಳಾಪಟ್ಟಿಯನ್ನು ಪರಿಷ್ಕರಿಸಿದೆ. ಅದರಂತೆ ಪರಿಷ್ಕೃತ ಚುನಾವಣಾ ವೇಳಾಪಟ್ಟಿ ಈ ಕೆಳಕಂಡಂತಿರುತ್ತದೆ.

## ಚುನಾವಣಾ ವೇಳಾ ಪಟ್ಟಿ

ದಿನಾಂಕ: 10.08.2018 ರಿಂದ ದಿನಾಂಕ: 16.08.2018ರ ವರೆಗಿನ ಚುನಾವಣಾ ಪ್ರಕ್ರಿಯೆಗಳಿಗೆ ಯಾವುದೇ ಬಾದಕವಿರುವುದಿಲ್ಲ.

| | | |
|---|---|---|
| 1 | ನಾಮಪತ್ರಗಳನ್ನು ಸಲ್ಲಿಸಲು ಕೊನೆಯ ದಿನಾಂಕ ಮತ್ತು ದಿನ | 18-08-2018 (ಶನಿವಾರ) |
| 2 | ನಾಮಪತ್ರಗಳನ್ನು ಪರಿಶೀಲಿಸುವ ದಿನಾಂಕ ಮತ್ತು ದಿನ | 20-08-2018 (ಸೊಮವಾರ) |
| 3 | ಉಮೇದುವಾರಿಕೆಗಳನ್ನು ಹಿಂತೆಗೆದುಕೊಳ್ಳಲು ಕೊನೆಯ ದಿನಾಂಕ ಮತ್ತು ದಿನ | 23-08-2018 (ಗುರುವಾರ) |
| **4** | **ಮತದಾನ ಅವಶ್ಯವಿದ್ದರೆ, ಮತದಾನವನ್ನು ನಡೆಸಬೇಕಾದ ದಿನಾಂಕ ಮತ್ತು ದಿನ (ಸಮಯ ಬೆಳಿಗ್ಗೆ 7.00 ಗಂಟೆಯಿಂದ ಸಾಯಂಕಾಲ 5.00 ಗಂಟೆವರೆಗೆ)** | **31-08-2018** (ಶುಕ್ರವಾರ) |
| 5 | ಮರು ಮತದಾನ ಇದ್ದಲ್ಲಿ ಮತದಾನ ನಡೆಸಬೇಕಾದ ದಿನಾಂಕ ಮತ್ತು ದಿನ (ಸಮಯ ಬೆಳಿಗ್ಗೆ 7.00 ಗಂಟೆಯಿಂದ ಸಾಯಂಕಾಲ 5.00 ಗಂಟೆವರೆಗೆ) | 02-09-2018 (ಭಾನುವಾರ) |
| 6 | ಮತಗಳ ಎಣಿಕೆಯ ದಿನಾಂಕ ಮತ್ತು ದಿನ (ಬೆಳಿಗ್ಗೆ 8.00 ಗಂಟೆಯಿಂದ) (ತಾಲ್ಲೂಕಿನ ಕೇಂದ್ರ ಸ್ಥಳದಲ್ಲಿ) | 03-09-2018 (ಸೋಮವಾರ) |
| 7 | ಚುನಾವಣೆಯನ್ನು ಯಾವ ದಿನಾಂಕಕ್ಕೆ ಮುಂಚೆ ಮುಕ್ತಾಯಗೊಳಿಸಬೇಕೋ ಆ ದಿನಾಂಕ ಮತ್ತು ದಿನ | 03-09-2018 (ಸೋಮವಾರ) |

ಮೇಲ್ಕಂಡ ಚುನಾವಣಾ ವೇಳಾಪಟ್ಟಿಯಂತೆ, ದಿನಾಂಕ: 29.08.2018 (ಬುಧವಾರ) ರಂದು ನಿಗದಿಯಾಗಿದ್ದ ಮತದಾನವು ದಿನಾಂಕ: 31.08.2018 (ಶುಕ್ರವಾರ) ನಡೆಯಲಿದೆ.

ದಿನಾಂಕ: 09.08.2018 ರಂದು ಮೂರು ಮಹಾನಗರ ಪಾಲಿಕೆಗೆ ಸಂಬಂಧಿಸಿದಂತೆ ಹೊರಡಿಸಲಾದ ಚುನಾವಣಾ ವೇಳಾಪಟ್ಟಿಯಲ್ಲಿ ಯಾವುದೇ ಬದಲಾವಣೆ ಇರುವುದಿಲ್ಲ.

ಈ ಬಗ್ಗೆ ಶ್ರವಣ ಮತ್ತು ದೃಶ್ಯ ಮಾಧ್ಯಮದಲ್ಲಿ ವ್ಯಾಪಕ ಪ್ರಚಾರ ನೀಡಿ ಸಹಕರಿಸುವಂತೆ ಕೋರಲಾಗಿದೆ.

ಅರ್ಚನ ಎಂ.ಎಸ್ 16/8/2018
(ಅರ್ಚನ ಎಂ.ಎಸ್)
ಅಧೀನ ಕಾರ್ಯದರ್ಶಿ,
ರಾಜ್ಯ ಚುನಾವಣಾ ಆಯೋಗ, ಕರ್ನಾಟಕ.

ಇವರಿಗೆ:

1. ನಿರ್ದೇಶಕರು, ವಾರ್ತಾ ಮತ್ತು ಪ್ರಚಾರ ಇಲಾಖೆ, ಬೆಂಗಳೂರು ಇವರಿಗೆ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
2. ವ್ಯವಸ್ಥಾಪಕರು_______ದಿನಪತ್ರಿಕೆ/ ದೂರ ದರ್ಶನ ಪ್ರಸಾರ ವಾಹಿನಿಗಳಿಗೆ ಕಳುಹಿಸಿ, ಸುದ್ದಿ ಮಾಧ್ಯಮದಲ್ಲಿ ಪ್ರಕಟಿಸುವಂತೆ ಕೋರಿದೆ.

ಪ್ರತಿಗಳು ಮಾಹಿತಿಗಾಗಿ:

1. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ವಿಕಾಸಸೌಧ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ, ವಿಕಾಸಸೌಧ, ಬೆಂಗಳೂರು.
3. ಪ್ರಾದೇಶಿಕ ಆಯುಕ್ತರು, ಬೆಂಗಳೂರು, ಮೈಸೂರು, ಬೆಳಗಾವಿ ಮತ್ತು ಕಲಬುರಗಿ ವಿಭಾಗ.
4. ಜಿಲ್ಲಾಧಿಕಾರಿಗಳು ಚಿತ್ರದುರ್ಗ, ದಾವಣಗೆರೆ, ತುಮಕೂರು, ಮೈಸೂರು, ಶಿವಮೊಗ್ಗ, ಚಾಮರಾಜನಗರ, ದಕ್ಷಿಣ ಕನ್ನಡ, ಉಡುಪಿ, ಹಾಸನ, ಮಂಡ್ಯ, ಕೊಡಗು, ಬೆಳಗಾವಿ, ವಿಜಯಪುರ, ಬಾಗಲಕೋಟೆ, ಗದಗ, ಹಾವೇರಿ, ಉತ್ತರ ಕನ್ನಡ, ಕಲಬುರಗಿ, ಕೊಪ್ಪಳ, ಬಳ್ಳಾರಿ, ರಾಯಚೂರು, ಬೀದರ್ ಮತ್ತು ಯಾದಗಿರಿ ಜಿಲ್ಲೆ.